# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (401) 406 |
| ಉತ್ತರಿಸಬೇಕಾದ ದಿನಾಂಕ | : | 23.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಆಶ್ರಯ, ಅಂಬೇಡ್ಕರ್, ಬಸವ ಯೋಜನೆಗಳಲ್ಲಿ ಮಂಜೂರಾದ ಮನೆಗಳಿಗೆ ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ಅರ್ಹ ಫಲಾನುಭವಿಗಳಗೆ ಸಕಾಲದಲ್ಲಿ ಹಣ ಬಿಡುಗಡಯಾಗದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ.<br><br>ವಿವಿಧ ವಸತಿ ಯೋಜನೆಗಳಡಿ ಅನುದಾನ ದುರ್ಬಳಕೆಯನ್ನು ತಡೆಹಿಡಿಯುವ ಹಾಗೂ ಸಾರ್ವಜನಿಕ ಹಣ ಪೋಲಾಗದಂತೆ ತಪ್ಪಿಸುವ ಉದ್ದೇಶದಿಂದ ಪ್ರಗತಿಯಲ್ಲಿರುವ ಮನೆಗಳನ್ನು ಮತ್ತೊಮ್ಮೆ Vigil App ಮೂಲಕ ಮರು ಪರಿಶೀಲಿಸಿ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಆದೇಶ ಸಂಖ್ಯೆ :ವಇ 154 ಹೆಚ್‌ಎಎಂ 2019, ದಿನಾಂಕ :16.11.2019ರನ್ವಯ ಕ್ರಮ ವಹಿಸಲಾಗುತ್ತಿದೆ.<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ 24724 ಮನೆಗಳನ್ನು Vigil App ಮೂಲಕ ಜಿ.ಪಿ.ಎಸ್.ಗೆ ಅಳವಡಿಸಲಾಗುತ್ತಿದ್ದು, ಈವರೆಗೆ "ವಿಜಿಲ್ ಆ್ಯಪ್" ಮೂಲಕ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು/ ಜಿಲ್ಲಾಧಿಕಾರಿಗಳು ಪರಿಶೀಲಿಸಿದ್ದು, 12449 ಮನೆಗಳು ಅರ್ಹಗೊಂಡಿರುತ್ತವೆ. ಅರ್ಹಗೊಂಡ ಮನೆಗಳಿಗೆ ಕಲಬುರಗಿ ಜಿಲ್ಲೆಗೆ ರೂ.40.10 ಕೋಟಿಗಳು ಮತ್ತು ಯಾದಗಿರಿ ಜಿಲ್ಲೆಗೆ ರೂ.19.84 ಕೋಟಿಗಳು ಹೀಗೆ ಒಟ್ಟು ರೂ.59.94 ಕೋಟಿಗಳನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗಿದೆ. ಇನ್ನುಳಿದ ಫಲಾನುಭವಿಗಳು ನಿರ್ಮಿಸಿಕೊಂಡ ಮನೆಗಳ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದ್ದು, ತ್ವರಿತವಾಗಿ ಅನುದಾನ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. |
| (ಆ) | ಮೇಲ್ಕಂಡ ಜಿಲ್ಲೆಗಳಲ್ಲಿ ಇಂತಹ ಸಮಸ್ಯೆಯಿರುವ ತಾಲ್ಲೂಕು ಹಾಗೂ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು ; | |
| (ಇ) | ತೊಂದರೆ ನಿವಾರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | |

ಸಂಖ್ಯೆ :ವಇ 284 ಹೆಚ್‌ಎಎಂ 2020

(ವಿ. ಸೋಮಣ್ಣ)
ವಸತಿ ಸಚಿವರು